# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ರವರ ಮೆ.ವ್ಯಾ. ಸಹ-ವಿದ್ಯುತ್ ಉತ್ಪಾದನೆ ಕೇಂದ್ರದ ಸಾಮರ್ಥ್ಯವನ್ನು 12 ಮೆ.ವ್ಯಾ. ನಿಂದ 27 ಮೆ.ವ್ಯಾ.ಗ ಹೆಚ್ಚಿಸಿ ನಿರಾಕ್ಷೇಪಣೆಯನ್ನು ನೀಡುವ ಬಗ್ಗೆ.

ಓದಲಾಗಿದೆ: 1 ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಆದೇಶ ಸಂಖ್ಯೆ: ವಾಕೈ 305 ಎಸ್‌ಜಿಎಫ್ 2013, ದಿನಾಂಕ: 21.02.2014.

2 ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/04/F-16/2014-15 /3986 ದಿನಾಂಕ: 22.09.2014.

898
8/4/15

* * *

**ಪ್ರಸ್ತಾವನೆ: -**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ: ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ರವರ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಸಂಕೋನಹಟ್ಟಿ ಕಾರ್ಖಾನೆಯ ಕಬ್ಬು ಅರೆಯುವ ಸಾಮರ್ಥ್ಯವನ್ನು 4000 ಟಿಸಿಡಿ ಯಿಂದ 5500 ಟಿಸಿಡಿ ಗೆ ಹೆಚ್ಚಿಸಲು ಹಾಗೂ ಸಹ-ವಿದ್ಯುತ್ ಘಟಕವನ್ನು 12 ಮೆ.ವ್ಯಾ. ನಿಂದ 27 ಮೆ.ವ್ಯಾ.ಗೆ ವಿಸ್ತರಿಸಲು ಕೆಲವೊಂದು ಷರತ್ತಿಗೊಳಪಟ್ಟು ಅನುಮೋದನೆಯನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಮೆ: ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ರವರು ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಸಂಕೋನಹಟ್ಟಿ ಗ್ರಾಮದಲ್ಲಿ ಸ್ಥಾಪಿಸಿರುವ 12 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕದ ಸಾಮರ್ಥ್ಯವನ್ನು 12 ಮೆ.ವ್ಯಾ. ನಿಂದ 27 ಮೆ.ವ್ಯಾ.ಗೆ ವೃದ್ಧಿಸಲು ಮತ್ತು ಈಗಾಗಲೇ ಇರುವ 12 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್ ಪಕ್ಕದಲ್ಲೇ ಇನ್ನೊಂದು 15 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್‌ನ್ನು ಅಳವಡಿಸಲು ಹಾಗೂ ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನಲ್ಲಿ ಋತು ಕಾಲದಲ್ಲಿ 17 ಮೆ.ವ್ಯಾ., ಋತುವಲ್ಲದ ಕಾಲದಲ್ಲಿ 13 ಮೆ.ವ್ಯಾ. ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಜೋಡಿಸುವ ಪ್ರಸ್ತಾವನೆಗೆ ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಅಭಿಪ್ರಾಯದೊಂದಿಗೆ ಶಿಫಾರಸ್ಸಿಸಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 207 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ: 04.03.2015.**

ಮೆ: ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ರವರು ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಸಂಕೋನಹಟ್ಟಿ ಗ್ರಾಮದಲ್ಲಿ ಸ್ಥಾಪಿಸಿರುವ ಸಕ್ಕರೆ ಕಾರ್ಖಾನೆಯೊಂದಿಗಿನ 12 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕದ ಸಾಮರ್ಥ್ಯವನ್ನು 12 ಮೆ.ವ್ಯಾ. ನಿಂದ 27 ಮೆ.ವ್ಯಾ.ಗೆ ಹೆಚ್ಚಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನಲ್ಲಿ ಋತು ಕಾಲದಲ್ಲಿ 17 ಮೆ.ವ್ಯಾ. ಋತುವಲ್ಲದ ಕಾಲದಲ್ಲಿ 13 ಮೆ.ವ್ಯಾ. ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಜೋಡಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ 'ನಿರಾಕ್ಷೇಪಣೆಯನ್ನು' ನೀಡಲಾಗಿದೆ.

1. ಈಗಾಗಲೇ ಇರುವ 12 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್ ಪಕ್ಕದಲ್ಲೇ ಇನ್ನೊಂದು 15 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್‌ನ್ನು ಅಳವಡಿಸಲು ಅನುಮತಿಸಿದೆ.

---2)

2. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ/ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
4. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಮಾಡಿಕೊಳ್ಳಲು / ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
5. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎--22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**
1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
9 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
10 ಮೆ: ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಸಂಕೋನಹಟ್ಟಿ ಪೋಸ್ಟ್ ಅಥಣಿ ತಾಲ್ಲೂಕು ಬೆಳಗಾವಿ ಜಿಲ್ಲೆ 587116.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.